**Bangalore**
**Regional News**
**06.06.2026 / 2.30 p.m.**
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ಮಾಜಿ ಮುಖ್ಯಮಂತ್ರಿ ದೇವರಾಜ ಅರಸು ಪುಣ್ಯತಿಥಿ : ಮುಖ್ಯಮಂತ್ರಿ ಸೇರಿದಂತೆ ಗಣ್ಯರಿಂದ ಗೌರವಾರ್ಪಣೆ
2. ಸಚಿವ ರಾಮಲಿಂಗಾರೆಡ್ಡಿ ರಾಜೀನಾಮೆ ಕುರಿತ ಸಮಸ್ಯೆ ಪರಿಹಾರ - ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್
3. ಹಿರಿಯ ಪೊಲೀಸ್ ಅಧಿಕಾರಿಗಳೊಂದಿಗೆ ಗೃಹ ಸಚಿವ ಪ್ರಿಯಾಂಕ್ ಖರ್ಗೆ ವಿಚಾರ ವಿನಿಮಯ
4. ವೃತ್ತಿಪರ ಕೋರ್ಸ್ ಪ್ರವೇಶ ಕುರಿತಾದ ಸಿಇಟಿ ಫಲಿತಾಂಶ ಪ್ರಕಟ
5. ಬೆಳಗಾವಿ ಸಾಂಬ್ರಾ ವಾಯುಪಡೆ ತರಬೇತಿ ಶಾಲೆಯಿಂದ ೧ ಸಾವಿರದ ೨೫೦ ಅಗ್ನಿವೀರರ ನಿರ್ಗಮನ ಪಥ ಸಂಚಲನ

<><><><>

ರಾಜ್ಯದ ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ಅವರ ಪುಣ್ಯತಿಥಿ ಸಂದರ್ಭದಲ್ಲಿ ಇಂದು ರಾಜ್ಯದ ವಿವಿಧೆಡೆ ಅವರಿಗೆ ಗೌರವ ನಮನ ಸಲ್ಲಿಸಲಾಗುತ್ತಿದೆ. ವಿಧಾನಸೌಧದ ಆವರಣದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ದಿವಂಗತ ಡಿ.ದೇವರಾಜ ಅರಸು ಅವರ ಪ್ರತಿಮೆ ಹಾಗೂ ಭಾವ ಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಮುಖ್ಯಮಂತ್ರಿ, ದೇವರಾಜ ಅರಸು ರವರು ಹಿಂದುಳಿದ ವರ್ಗಗಳ ಬಗ್ಗೆ ಕಳಕಳಿ ಹೊಂದಿದ್ದರು. ಈ ವರ್ಗವನ್ನು ರಾಜಕೀಯ, ಶೈಕ್ಷಣಿಕ ಹಾಗೂ ಆರ್ಥಿಕವಾಗಿ ಅಭಿವೃದ್ಧಿಪಡಿಸುವ ಬಗ್ಗೆ ಕಾಳಜಿ ಇತ್ತು. ಅವರು ರಾಜ್ಯದ ಆಡಳಿತಕ್ಕೆ ಉತ್ತಮ ಅಡಿಪಾಯ ಹಾಕಿದ ಧೀಮಂತ ನಾಯಕ ಎಂದು ಸ್ಮರಿಸಿದರು.

ಧ್ವನಿ : ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್

ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್, ಸಚಿವ ಯು.ಟಿ.ಖಾದರ್, ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಉಪಸ್ಥಿತರಿದ್ದರು. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿಧಾನಸೌಧದ ಆವರಣದಲ್ಲಿ ಅರಸು ಪ್ರತಿಮೆಗೆ ಪುಷ್ಮನಮನ ಸಲ್ಲಿಸಿ, ಗೌರವಾರ್ಪಣೆ ಮಾಡಿದರು.

<><><><>

ಸಚಿವ ರಾಮಲಿಂಗಾರೆಡ್ಡಿ ರಾಜೀನಾಮೆ ಕುರಿತ ಎಲ್ಲ ಸಮಸ್ಯೆಗಳನ್ನ ಪರಿಹರಿಸಲಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ. ಅವರು ಬೆಂಗಳೂರಿನಲ್ಲಿ ಇಂದು ಸುದ್ದಿಗಾರರ ಪ್ರಶ್ನೆಗಳಿಗೆ ಉತ್ತರಿಸಿ, ಇದು ಆತಂತರಿಕ ವಿಚಾರ ಎಂದರು. ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಂಡಾಗ ಪ್ರಧಾನಿ ನರೇಂದ್ರ ಮೋದಿಯವರು ತಮಗೆ ಶುಭಾಶಯ ತಿಳಿಸಿದ್ದು, ಇದಕ್ಕೆ ಪ್ರತಿಯಾಗಿ ಅವರಿಗೆ ಧನ್ಯವಾದವನ್ನು ತಿಳಿಸಲಾಗಿದೆ. ಮುಂಬರುವ ದಿನಗಳಲ್ಲಿ ಪ್ರಧಾನಿಯವರನ್ನು ಭೇಟಿ ಮಾಡಲಾಗುವುದು ಹಾಗೂ ರಾಜ್ಯದ ಜನತೆಗೆ ಒಳಿತಾಗುವಂತಹ ಕೆಲಸಗಳನ್ನು ಮಾಡಲಾಗುವುದು ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದರು.

<><><>

ಗೃಹ ಸಚಿವ ಪ್ರಿಯಾಂಕ್ ಖರ್ಗೆ ಬೆಂಗಳೂರಿನಲ್ಲಿಂದು ಹಿರಿಯ ಪೊಲೀಸ್ ಅಧಿಕಾರಿಗಳೊಂದಿಗೆ ವಿಚಾರ-ವಿನಿಮಯ ನಡೆಸಿದರು. ರಾಜ್ಯ ಪೊಲೀಸ್ ಮಹಾನಿರ್ದೇಶಕ ಮತ್ತು ಐಜಿಪಿ ಡಾ.ಎಂ.ಎ.ಸಲೀಂ ಹಾಗೂ ಹಿರಿಯ ಅಧಿಕಾರಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು. ಸಭೆಯಲ್ಲಿ ರಾಜ್ಯದ ಅಪರಾಧ ಪ್ರಕರಣಗಳು, ಸಿಬ್ಬಂದಿ ನೇಮಕಾತಿ, ಕಾನೂನು ಸುವ್ಯವಸ್ಥೆ, ಮಾದಕವಸ್ತುಗಳ ನಿಯಂತ್ರಣ ಮುಂತಾದ ವಿಷಯಗಳ ಕುರಿತಂತೆ ವಿಸ್ತೃತ ಚರ್ಚೆ ನಡೆಸಲಾಯಿತು. ಪೊಲೀಸ್ ಮಹಾನಿರ್ದೇಶಕರ ವ್ಯಾಪ್ತಿಯಲ್ಲಿ ಬರುವ ೭ ಕಮೀಷನರೇಟ್‌ಗಳ ಸ್ಥಿತಿಗತಿಗಳ ಕುರಿತು ಚರ್ಚಿಸಿ, ಸಾಂವಿಧಾನಿಕ ಚೌಕಟ್ಟನ್ನು ಮೀರುವ ಯಾವುದೇ ವ್ಯಕ್ತಿ ಮತ್ತು ಯಾವುದೇ ಪ್ರಕರಣಗಳ ವಿರುದ್ಧ ರಾಜಿ ಇಲ್ಲದೆ ಕ್ರಮ ಜರುಗಿಸಬೇಕು, ಸರ್ಕಾರಕ್ಕೆ ಮುಜುಗರವಾಗುವಂತಹ ನಡವಳಿಕೆಗಳನ್ನು ಸಹಿಸುವುದಿಲ್ಲ ಎಂದು ಸಚಿವರು ಈ ಸಂದರ್ಭದಲ್ಲಿ ಸ್ಪಷ್ಟಪಡಿಸಿದರು.

<><><>

ಕರ್ನಾಟಕ ಪರೀಕ್ಷಾ ಪ್ರಾಧಿಕಾರ ವಿವಿಧ ವೃತ್ತಿಪರ ಕೋರ್ಸ್‌ಗಳ ಪ್ರವೇಶಾತಿಗಾಗಿ ನಡೆಸಿದ, ೨೦೨೬ನೇ ಸಾಲಿನ ಸಾಮಾನ್ಯ ಪ್ರವೇಶ ಪರೀಕ್ಷೆ - ಯು.ಜಿ. ಸಿ.ಇ.ಟಿ ಫಲಿತಾಂಶವನ್ನು ಪ್ರಕಟಿಸಲಾಗಿದೆ. ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಖಾತೆ ಸಚಿವ ಡಾ.ಶರಣಪ್ರಕಾಶ ಪಾಟೀಲ್ ಬೆಂಗಳೂರಿನಲ್ಲಿ ಸುದ್ದಿಗೋಷ್ಠಿ ನಡೆಸಿ ಫಲಿತಾಂಶ ಪ್ರಕಟಿಸಿದರು. ವಿದ್ಯಾರ್ಥಿಗಳು **cetonline.karnataka.gov.in/kea** ಜಾಲತಾಣದಲ್ಲಿ ಫಲಿತಾಂಶ ವೀಕ್ಷಿಸಬಹುದು ಎಂದು ಕೆ.ಇ.ಎ. ಕಾರ್ಯನಿರ್ವಾಹಕ ನಿರ್ದೇಶಕ ಎಚ್. ಪ್ರಸನ್ನ ತಿಳಿಸಿದ್ದಾರೆ.

<><><>

ಗ್ರಾಮೀಣ ಭಾರತಾದ್ಯಂತ ತರಬೇತಿ ಪಡೆದ ನಳ-ಜಲ-ಮಿತ್ರರು ಹಳ್ಳಿಗಳಲ್ಲಿ ನೀರು ಸರಬರಾಜು ಮೂಲಸೌಕರ್ಯ ನಿರ್ವಹಣೆ ಹಾಗೂ ದುರಸ್ತಿಯಲ್ಲಿ ಪ್ರಮುಖ ಪಾತ್ರ ವಹಿಸುತ್ತಿದ್ದಾರೆ ಎಂದು ಕೇಂದ್ರ ಜಲಶಕ್ತಿ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ತಿಳಿಸಿದ್ದಾರೆ. ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದ ಕೇಂದ್ರದ ಎನ್.ಡಿ.ಎ. ಸರ್ಕಾರದ ೧೨ ವ?ಗಳ

ಸಾಧನೆ ವಿವರಿಸಿ ಏಳು ವ?ಗಳ ಜಲ್ ಜೀವನ್ ಮಿ?ನ್ ಅಭಿಯಾನದ ಯಶೋಗಾಥೆ ಹಂಚಿಕೊಂಡಿದ್ದಾರೆ. ಹರ್ ಘರ್ ಜಲ್ ಯೋಜನೆಯ ಅನುಷ್ಠಾನದಲ್ಲಿ ಯುವಶಕ್ತಿ ಕೈ ಜೋಡಿಸಿದೆ ಎಂದು ಶ್ಲಾಘಿಸಿದ್ದಾರೆ.

<><><><>

ರಾಜ್ಯದ ಮಾಜಿ ಮುಖ್ಯಮಂತ್ರಿ ದಿವಂಗತ ಎಸ್.ಆರ್.ಬೊಮ್ಮಾಯಿ ಅವರ ೧೦೨ನೇ ಜನ್ಮದಿನದ ಅಂಗವಾಗಿ ಹುಬ್ಬಳ್ಳಿಯಲ್ಲಿಂದು ನಡೆದ ಕಾರ್ಯಕ್ರಮದಲ್ಲಿ ಅವರ ಸಮಾಜಸೇವೆಯನ್ನು ಸ್ಮರಿಸಲಾಯಿತು. ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿ, ಡಾ.ಪಿ.ವಿ.ದತ್ತಿ ಶ್ರವಣ ಹಾಗೂ ಮಾತಿನ ವಿಶೇಷ ಚೇತನರ ರೋಟರಿ ಶಾಲೆ ತೆರೆಯುವಲ್ಲಿ ಎಸ್.ಆರ್.ಬೊಮ್ಮಾಯಿ ಅವರು ತೋರಿದ ಕಾಳಜಿಯನ್ನು ಪ್ರಸ್ತಾಪಿಸಿದರು. ಈ ಶಾಲೆ ವಿಶೇಷ ಚೇತನ ಮಕ್ಕಳಲ್ಲಿ ಆತ್ಮವಿಶ್ವಾಸ ಹಾಗೂ ಪಾಲಕರಲ್ಲಿ ಹೊಸ ಭರವಸೆ ಮೂಡಿಸುತ್ತಿದೆ ಎಂದು ಬಸವರಾಜ ಬೊಮ್ಮಾಯಿ ಹೇಳಿದರು.
ಈ ಸಂದರ್ಭದಲ್ಲಿ ಮಕ್ಕಳಿಗೆ ನೋಟ್ ಪುಸ್ತಕ ಹಾಗೂ ಸಿಹಿ ಹಂಚಲಾಯಿತು.

<><><><>

ಬೆಳಗಾವಿ ಸಾಂಬ್ರಾದ ಭಾರತೀಯ ವಾಯುಪಡೆ ತರಬೇತಿ ಶಾಲೆಯಲ್ಲಿ ಸತತ ೨೨ ವಾರಗಳ ವರೆಗೆ ಅತ್ಯಂತ ಕಠಿಣ ಹಾಗೂ ಪರಿಣಾಮಾತ್ಮಕ ತರಬೇತಿ ಪಡೆದ ೭ನೇ ತಂಡದ ೧ ಸಾವಿರದ ೨೫೦ ಪ್ರಶಿಕ್ಷಣಾರ್ಥಿಗಳ ಆಕರ್ಷಕ ನಿರ್ಗಮನ ಪಥ ಸಂಚಲನ ಇಂದು ನಡೆಯಿತು. ಏರ್‌ಮೆನ್ ತರಬೇತಿ ಶಾಲೆಯ ಕಮಾಂಡಿಂಗ್ ಏರ್ ಆಫೀಸರ್ ಸೂರಜ್ ಶಂಕರ್, ವಾಯುಪಡೆ ಅಗ್ನಿವೀರರ ನಿರ್ಗಮನ ಪಥ ಸಂಚಲನ ವೀಕ್ಷಿಸಿ, ಗೌರವ ವಂದನೆ ಸ್ವೀಕರಿಸಿದರು. ಅವರು ಮಾತನಾಡಿ, ಪುರುಷರೊಂದಿಗೆ ಮಹಿಳೆಯರು ವಾಯುಪಡೆಯಲ್ಲಿ ಸಾಮರ್ಥ್ಯ ಪ್ರದರ್ಶಿಸುತ್ತಿರುವುದು ಅವರ ಆತ್ಮವಿಶ್ವಾಸದ ನಿದರ್ಶನವಾಗಿದೆ ಎಂದರು. ವಾಯುಪಡೆ ಅಗ್ನಿವೀರ ಪ್ರಶಿಕ್ಷಣಾರ್ಥಿಗಳ ನಿರ್ಗಮನ ಪಥ ಸಂಚಲನ ನಿಮಿತ್ತ ಈ ಬಾರಿ ಭಾರತೀಯ ವಾಯುಸೇನೆಯ ವಿಶ್ವವಿಖ್ಯಾತ ಕುಶಾಲಾಗ್ರ ಸಾರಂಗ ಪೈಲಟ್ ತಂಡದಿಂದ ರೋಮಾಂಚಕಾರಿ ಹೆಲಿಕಾಪ್ಟರ್ ಪ್ರದರ್ಶನ ವಾಯುಪಡೆ ತರಬೇತಿ ಶಾಲೆಯ ಆವರಣದಲ್ಲಿ ನಡೆಯಿತು. ಐದು ಹೆಲಿಕಾಪ್ಟರ್ ಗಳು ಸುಮಾರು ೧೫ ನಿಮಿಷದ ವರೆಗೆ ನೀಡಿದ ಪ್ರದರ್ಶನ ವಿಶೇಷ ಗಮನ ಸೆಳೆಯಿತು. ಏರ್ ಶೋನಲ್ಲಿ ವಿಶ್ವದಲ್ಲೇ ಏಕೈಕ ೫ ಹೆಲಿಕಾಪ್ಟರ್ ಡಿಸ್ಪ್ಲೇ ತಂಡವಾದ 'ಸಾರಂಗ್', ಸ್ವದೇಶಿ ನಿರ್ಮಿತ ಎಎಲ್‌ಎಚ್ ಧ್ರುವ ಹೆಲಿಕಾಫ್ಟರ್‌ಗಳನ್ನು ಬಳಸಿ ಆಕಾಶದಲ್ಲಿ ನಾನಾ ರೀತಿಯ ಕಸರತ್ತುಗಳನ್ನು ನಡೆಸಿ ವಿಭಿನ್ನ ಚಿತ್ತರ ಮೂಡಿಸಿತು.

<><><><>

ಕೊಡಗು ಜಿಲ್ಲೆಯ ಕೆದಮುಳ್ಳೂರು ಗ್ರಾಮದಲ್ಲಿ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ನೂತನವಾಗಿ ನಿರ್ಮಿಸಿರುವ ೪೩ ಮನೆಗಳ ಬೀಗದ ಕೀ ಯನ್ನು ಶಾಸಕ ಎ.ಎಸ್.ಪೊನ್ನಣ್ಣ ಫಲಾನುಭವಿಗಳಿಗೆ ಇಂದು ಹಸ್ತಾಂತರಿಸಿದರು. ಅವರು ಈ ಸಂದರ್ಭದಲ್ಲಿ ಸುಮಾರು ೭ ಎಕರೆ ಜಾಗದಲ್ಲಿ ನಿರ್ಮಿಸಲಾಗಿರುವ ಮನೆ ಉದ್ಘಾಟಿಸಿದ ನಂತರ ಮೂಲಸೌಕರ್ಯ ಕಾಮಗಾರಿಗೆ ಚಾಲನೆ ನೀಡಿದರು.

<><><><>

ಮಹಿಳೆಯರನ್ನು ಆರ್ಥಿಕವಾಗಿ ಸಬಲೀಕರಣಗೊಳಿಸಬೇಕು ಎಂಬ ಉದ್ದೇಶದಿಂದ ಪಾಂಡವಪುರ ಪಟ್ಟಣದಲ್ಲಿ ಅಕ್ಕ ಕೆಫೆ ಆರಂಭಿಸಲಾಗಿದೆ ಎಂದು ಶಾಸಕ ದರ್ಶನ್‌ಪುಟ್ಟಣ್ಣಯ್ಯ ಹೇಳಿದರು. ಮಂಡ್ಯ ಜಿಲ್ಲೆ ಪಾಂಡವಪುರ ಪಟ್ಟಣದ ತಾಲೂಕು ಪಂಚಾಯತ್ ಆವರಣದಲ್ಲಿ ನಿರ್ಮಿಸಲಾಗಿರುವ ಅಕ್ಕ ಕೆಫೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಶಂಭೂನಹಳ್ಳಿ ಗ್ರಾಮದ ಸ್ವಸಹಾಯ ಸಂಘದ ಗುಂಪಿನ ೮ ಮಂದಿ ಮಹಿಳಾ ಸದಸ್ಯರು ಇದರ ನಿರ್ವಹಣೆಯ ಜವಾಬ್ದಾರಿ ಹೊತ್ತಿದ್ದಾರೆ. ಇಂತಹ ಅಕ್ಕ ಕೆಫೆಯನ್ನು ಉಳಿಸಿ ಬೆಳೆಸಿಕೊಂಡು ಹೋಗಬೇಕಾಗಿದೆ ಎಂದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣ ಅಧಿಕಾರಿ ಕೆ.ಆರ್.ನಂದಿನಿ ಮಾತನಾಡಿ, ರಾಷ್ಟ್ರೀಯ ಜೀವನೋಪಾಯ ಅಭಿಯಾನದಡಿ ಮಹಿಳಾ ಸಬಲೀಕರಣ ಹಾಗೂ ಮಹಿಳೆಯರು ಆರ್ಥಿಕವಾಗಿ ಸ್ವಾವಲಂಬಿ ಬದುಕು ನಡೆಸಬೇಕು ಎಂಬ ಉದ್ದೇಶದಿಂದ 'ಅಕ್ಕಕೆಫೆ'ಯನ್ನು ಆರಂಭಿಸಲಾಗಿದೆ. ಇದರಿಂದ ಹಲವಾರು ಸ್ವಸಹಾಯ ಸಂಘಗಳ ಮಹಿಳೆಯರು ಆರ್ಥಿಕವಾಗಿ ಸಬಲೀಕರಣಗೊಂಡು ಕುಟುಂಬ ನಿರ್ವಹಣೆಗೆ ಸಹಕಾರಿಯಾಗಲಿದೆ ಎಂದು ತಿಳಿಸಿದರು.

<><><><>

ಹಾವೇರಿ ಜಿಲ್ಲೆಯಲ್ಲಿ ವಿವಿಧ ವಾಣಿಜ್ಯ ಅಂಗಡಿಗಳ ಮೇಲೆ ದಾಳಿ ನಡೆಸಿ ಕಳೆದ ಸಾಲಿನಲ್ಲಿ ೧೭ ಬಾಲ ಹಾಗೂ ಕಿಶೋರ ಕಾರ್ಮಿಕರನ್ನು ಪತ್ತೆ ಮಾಡಲಾಗಿದೆ. ಈ ಪೈಕಿ ಎರಡು ಪ್ರಕರಣಗಳಲ್ಲಿ ಮೊಕದ್ದಮೆ ದಾಖಲಿಸಲಾಗಿದೆ ಎಂದು ಜಿಲ್ಲಾ ಕಾರ್ಮಿಕ ಅಧಿಕಾರಿ ತರನ್ನುಮ ಬೆಂಗಾಲಿ ಮಾಹಿತಿ ನೀಡಿದ್ದಾರೆ. ಎಂಟು ಮಕ್ಕಳನ್ನು ಮಕ್ಕಳ ಕಲ್ಯಾಣ ಸಮಿತಿಗೆ ಹಾಜರುಪಡಿಸಲಾಗಿದೆ. ಆರು ಮಕ್ಕಳನ್ನು ಶಾಲೆಗೆ ದಾಖಲಿಸಲಾಗಿದೆ ಮತ್ತು ಮೂರು ಮಕ್ಕಳನ್ನು ಪೋಷಕರ ವಶಕ್ಕೆ ನೀಡಲಾಗಿದೆ ಎಂದು ಅವರು ತಿಳಿಸಿದ್ದಾರೆ.

<><><><>

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಇದೇ ೨೦ರಿಂದ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಯನ್ನು ಕೈಗೊಳ್ಳಲಾಗುವುದು. ಅರ್ಹ ಮತದಾರರಿಗೆ ಯಾವುದೇ ಕಾರಣಕ್ಕೂ ಅನ್ಯಾಯವಾಗುವುದಿಲ್ಲ. ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆಗೆ ಸಾರ್ವಜನಿಕರ ಸಹಕಾರ ಮುಖ್ಯವಾಗಿದ್ದು, ಯಾವುದೇ ಊಹಾಪೋಹಗಳಿಗೆ ಕಿವಿಗೊಡಬಾರದು ಎಂದು ಜಿಲ್ಲಾಧಿಕಾರಿ ಡಾ.ಕೆ.ಎನ್.ಅನುರಾಧ ಮನವಿ ಮಾಡಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಲ್ಲಾ ಮತದಾರ ನೋಂದಣಾಧಿಕಾರಿಗಳಿಗೆ ಮತ್ತು ಸಹಾಯಕ ಮತದಾರ ನೋಂದಣಾಧಿಕಾರಿಗಳಿಗೆ ಈಗಾಗಲೇ ತರಬೇತಿಯನ್ನು ನೀಡಲಾಗಿದೆ ಎಂದರು. ಕೊಡಗು ಜಿಲ್ಲೆಯಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆಗೆ ಸಂಬಂಧಿಸಿದಂತೆ ರಾಜಕೀಯ ಪಕ್ಷಗಳ ಮುಖಂಡರ ಜೊತೆ ಜಿಲ್ಲಾ ಚುನಾವಣಾಧಿಕಾರಿ ಮತ್ತು ಜಿಲ್ಲಾಧಿಕಾರಿ ಎಸ್.ಜೆ.ಸೋಮಶೇರ್ ಇಂದು ಸಭೆ ನಡೆಸಿದರು. ಮತದಾರರ ಪಟ್ಟಿ ಸಮಗ್ರ ಪರಿಷ್ಕರಣೆಯನ್ನು ಜಿಲ್ಲೆಯಲ್ಲಿ ವ್ಯವಸ್ಥಿತವಾಗಿ ಮತ್ತು ಪಾರದರ್ಶಕವಾಗಿ ಪೂರ್ಣಗೊಳಿಸಲು ಪಕ್ಷದ ಮುಖಂಡರುಗಳು ಸಹಕಾರ ನೀಡುವಂತೆ ಕೋರಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>